782 ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಕೆಲವು ಪ್ರಮುಖ ರಸ್ತೆಗಳನ್ನು ಪ್ಯಾಕೇಜ್ ಯೋಜನೆಯಡಿಯಲ್ಲಿ ಸುಮಾರು (10 ಸಾವಿರ ಕಿಮೀ) ರಸ್ತೆ ಅಭಿವೃದ್ಧಿಪಡಿಸಲು ಸರ್ಕಾರವು ಕ್ರಮ ಕೈಗೊಂಡಿರುವುದು ನಿಜವಲ್ಲವೇ;

ಆ) ಹಾಗಿದ್ದಲ್ಲಿ, ಯಾವ ಯಾವ ಪ್ಯಾಕೇಜ್‌ಗಳು ಕಾರ್ಯಾರಂಭವಾಗುವ ಹಂತಕ್ಕೆ ತಲುಪಿವೆ;

ಇ) ಹಾಗಿಲ್ಲದಿದ್ದಲ್ಲಿ, ರಸ್ತೆಗಳನ್ನು ಅಭಿವೃದ್ಧಿ ಪಡಿಸುವುದಕ್ಕೆ ಸರ್ಕಾರದ ಮುಂದಿರುವ ಯೋಜನೆಗಳೇನು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ರಾಜ್ಯದಲ್ಲಿನ 1995 ಕಿಮೀ. ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲು ಯೋಜಿಸಲಾಗಿರುತ್ತದೆ.

ಆ) ಪ್ಯಾಕೇಜು ನಂ.8, 38, 3, 34, 35, 13 ಮತ್ತು 2 ಗಳಿಗೆ ವಿವರವಾದ ಯೋಜನಾ ವರದಿಗಳನ್ನು ತಯಾರಿಸಲಾಗಿರುತ್ತದೆ. ಇವುಗಳ ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಇ) ಮೇಲೆ ನಮೂದಿಸಿರುವ ಪ್ಯಾಕೇಜ್‌ಗಳನ್ನು ಪೈಲಟ್ ಯೋಜನೆಗಳಾಗಿ ಪಿ.ಪಿ.ಪಿ. ಮಾದರಿಯಲ್ಲಿ ಅಭಿವೃದ್ಧಿಗೊಳಿಸಲು ಕಾಮಗಾರಿಗಳನ್ನು ಪ್ರಾರಂಭಿಸಿದ ನಂತರ, ಉಳಿದ ಪ್ಯಾಕೇಜ್‌ಗಳ ಕಾರ್ಯಸಾಧ್ಯತಾ ವರದಿಗಳನ್ನು ತಯಾರಿಸಿ ರಸ್ತೆಗಳನ್ನು ಅಭಿವೃದ್ಧಿಗೊಳಿಸುವ ಬಗ್ಗೆ ಪರಿಶೀಲಿಸಲಾಗುವುದು.

642 ಶ್ರೀ ಸುಭಾಷ್ ಆರ್.ಗುತ್ತೇದಾರ್ (ಅಳಂದ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಾಗದಿರಿ–ರಿಪ್ಪನ್‌ಪಲ್ಲಿ ರಸ್ತೆಯು ಕರ್ನಾಟಕದಲ್ಲಿ ಇದೆಯೇ;

ಆ) ಹಾಗಿದ್ದಲ್ಲಿ, ಈ ರಸ್ತೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;